# ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರ ಕಛೇರಿ, ಬಳ್ಳಾರಿ.

## ಅಧಿಸೂಚನೆ ಸಂಖ್ಯೆ: 02/2020

## ದಿನಾಂಕ : 16ನೇ ಜನವರಿ-2020.

ವಿಷಯ: ಬೆರಳಚ್ಚು-ನಕಲುಗಾರ ಹುದ್ದೆಗಳ ನೇಮಕಾತಿ ಬಗ್ಗೆ.

ಉಲ್ಲೇಖ: ಮಾನ್ಯ ಉಚ್ಚ ನ್ಯಾಯಾಲಯದ ಪತ್ರ ಸಂಖ್ಯೆ **LCA II-128/2012** ದಿ: **21.12.2019.**

**ಅರ್ಜಿಗಳನ್ನು ಸಲ್ಲಿಸಲು ಕೊನೆಯ ದಿನಾಂಕ:24-02-2020**

ಬಳ್ಳಾರಿ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಲಯ ಘಟಕದ ವಿವಿಧ ನ್ಯಾಯಾಲಯಗಳಲ್ಲಿ ಕೆಳಗೆ ವಿವರಿಸಿರುವಂತೆ ಖಾಲಿ ಇರುವ ಹೈದರಾಬಾದ್-ಕರ್ನಾಟಕ ಸ್ಥಳೀಯ ವೃಂದದ ಬೆರಳಚ್ಚು-ನಕಲುಗಾರ ಹುದ್ದೆಗೆ ಅರ್ಹ ಅಭ್ಯರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿಗಳನ್ನು ಅಹ್ವಾನಿಸಲಾಗಿದೆ. ಅರ್ಜಿಗಳನ್ನು ಬಳ್ಳಾರಿ ಜಿಲ್ಲಾ ನ್ಯಾಯಾಲಯ ವೆಬ್‌ಸೈಟ್ **http://districts.ecourts.gov.in/ballari** ಅಥವಾ **http://karnatakajudiciary.kar.nic.in/districtrecruitment.asp** ನಲ್ಲಿ ನೀಡಲಾದ ಲಿಂಕ್ ಮೂಲಕ ಆನ್‌ಲೈನ್‌ನಲ್ಲಿ ದಿನಾಂಕ: **24.01.2020** ರಿಂದ ದಿನಾಂಕ **24.02.2020**ರ ರಾತ್ರಿ **11.59** ರವರೆಗೆ ಮಾತ್ರ ಸಲ್ಲಿಸತಕ್ಕದ್ದು.

## ಬೆರಳಚ್ಚು ನಕಲುಗಾರರು (Typist-Copyist)

(1) ಹುದ್ದೆಗಳ ಸಂಖ್ಯೆ : **09**

(2) ವೇತನ ಶ್ರೇಣಿ : 21400-500-22400-550-24600-600-27000-650-29600-750-32600-850-36000-950-39800-1100-42000 ಹಾಗೂ ಇತರೆ ಭತ್ಯೆಗಳು.

(3) ಹುದ್ದೆಗಳ ವರ್ಗೀಕರಣ :

**ಹೈದರಾಬಾದ್- ಕರ್ನಾಟಕ ಸ್ಥಳೀಯ ವೃಂದದ ಹುದ್ದೆಗಳ ವರ್ಗೀಕರಣ (Hyderabad Karnataka Local Cadre)**

| ವರ್ಗೀಕರಣ | ಮಹಿಳೆ | ಗ್ರಾ.ಅ | ಮಾ.ಸೈ. | ಅಂ.ಅ | ಇತರೆ | ಒಟ್ಟು |
|---|---|---|---|---|---|---|
| ಪರಿಶಿಷ್ಟ ಜಾತಿ | 01 | - | - | 01 | - | 02 |
| ಪ್ರವರ್ಗ-2ಎ | - | 01 | - | 01 | - | 02 |
| ಪ್ರವರ್ಗ-3ಬಿ | - | - | - | - | 01 | 01 |
| ಸಾಮಾನ್ಯ ವರ್ಗ | 01 | 02 | 01 | - | - | 04 |
| ಒಟ್ಟು | 02 | 03 | 01 | 02 | 01 | 09 |

**ವಿಶೇಷ ಸೂಚನೆ :-** ಗ್ರಾ.ಅ = ಗ್ರಾಮೀಣ ಅಭ್ಯರ್ಥಿ
ಮಾ.ಸೈ = ಮಾಜಿ ಸೈನಿಕ ಅಭ್ಯರ್ಥಿ
ಅಂ.ಅ = ಅಂಗವಿಕಲ ಅಭ್ಯರ್ಥಿ

**ವಿದ್ಯಾರ್ಹತೆ :** ಎಸ್.ಎಸ್.ಎಲ್.ಸಿ. ಅಥವಾ ತತ್ಸಮಾನ ಪರೀಕ್ಷೆ ಮತ್ತು ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯು ನಡೆಸುವ ಕನ್ನಡ ಮತ್ತು ಇಂಗ್ಲೀಷ್ ಎರಡೂ ಭಾಷೆಯಲ್ಲೂ ಕಿರಿಯ ಶ್ರೇಣಿ ಬೆರಳಚ್ಚು ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿರುವ ಕಡೆಯ ದಿನಾಂಕದೊಳಗೆ ಉತ್ತೀರ್ಣರಾಗಿರಬೇಕು.

## ಅರ್ಹತಾ ಪರೀಕ್ಷೆ :

ಅಭ್ಯರ್ಥಿಗಳಿಗೆ 15 ನಿಮಿಷಗಳ ಅವಧಿಯಂತೆ ಕನ್ನಡ/ಇಂಗ್ಲೀಷ್ ಭಾಷೆಗಳಲ್ಲಿ ಬೆರಳಚ್ಚು ಮಾಡಲು ಉಕ್ತಲೇಖನ ನೀಡಲಾಗುವುದು.

## ವಯೋಮಿತಿ:

(ಅ) ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಅಭ್ಯರ್ಥಿಯು ಕನಿಷ್ಟ-18ವರ್ಷ ವಯಸ್ಸನ್ನು ಪೂರೈಸಿರತಕ್ಕದ್ದು

(ಆ) **ಗರಿಷ್ಠ ವಯೋಮಿತಿ:**

| | |
|---|---|
| ಸಾಮಾನ್ಯ ವರ್ಗ: | **35** ವರ್ಷಗಳು. |
| 2ಎ, 2ಬಿ, 3ಎ, 3ಬಿ : | **38** ವರ್ಷಗಳು. |
| ಪರಿಶಿಷ್ಟ ಜಾತಿ : ಪರಿಶಿಷ್ಟ ಪಂಗಡ : ಪ್ರವರ್ಗ-1 : | **40** ವರ್ಷಗಳು |

**ವಿಶೇಷ ಸೂಚನೆ:** ಮಾಜಿ ಸೈನಿಕರಿಗೆ ಗರಿಷ್ಟ ವಯೋಮಿತಿ ಅವರು ಸಶಸ್ತ್ರ ದಳಗಳಲ್ಲಿ ಎಷ್ಟು ವರ್ಷ ಸೇವೆ ಸಲ್ಲಿಸಿರುವರೋ ಅಷ್ಟು ವರ್ಷಗಳಿಗೆ ಮೂರು ವರ್ಷಗಳನ್ನು ಸೇರಿಸಿದರೆ ಎಷ್ಟು ವರ್ಷಗಳಾಗುವುದೋ ಅಷ್ಟು ವರ್ಷಗಳ ಸಡಿಲಿಕೆ ಮತ್ತು ವಿಧವೆಯವರಿಗೆ ಮತ್ತು ಅಂಗವಿಕಲರಿಗೆ 10 ವರ್ಷಗಳ ಸಡಿಲಿಕೆ.

ಸರಕಾರಿ ಸೇವೆಯಲ್ಲಿರುವ ಅಭ್ಯರ್ಥಿಗಳಿಗೆ ಎಷ್ಟು ವರ್ಷ ಸೇವೆ ಸಲ್ಲಿಸಿರುವರೋ ಅಷ್ಟು ವರ್ಷಗಳು ಅಥವಾ 10 ವರ್ಷಗಳು, ಇವುಗಳಲ್ಲಿ ಯಾವುದು ಕಡಿಮೆಯೊ ಅಷ್ಟು ವರ್ಷಗಳ ಸಡಿಲಿಕೆ.

ಆಯ್ಕೆಯಾದ ಅಭ್ಯರ್ಥಿಗಳು ಕರ್ನಾಟಕ ಸೇವಾ ನಿಯಮ (ಪರಿವೀಕ್ಷಣೆ ನಿಯಮಗಳು) 1977ರ ಪ್ರಕಾರ ಎರಡು ವರ್ಷಗಳ ಕಾಲ ಪರಿವೀಕ್ಷಣಾ ಅವಧಿಯಲ್ಲಿರುತ್ತಾರೆ. ಈ ಅವಧಿಯಲ್ಲಿ ಅಭ್ಯರ್ಥಿಗಳು ಹುದ್ದೆಗೆ ನಿಗದಿಪಡಿಸಿರುವ ಇಲಾಖಾ ಪರೀಕ್ಷೆಗಳಲ್ಲಿ ಕನ್ನಡ ಭಾಷಾ ಪರೀಕ್ಷೆಯಲ್ಲಿ ಉತ್ತೀರ್ಣರಾಗಬೇಕಾಗಿರುತ್ತದೆ.

ಆಯ್ಕೆಯಾದ ಅಭ್ಯರ್ಥಿಗಳು ಪರಿವೀಕ್ಷಣಾ ಅವಧಿಯೊಳಗೆ ಸರ್ಕಾರವು ಅನುಮೋದಿಸಿದ ಏಜೆನ್ಸಿಯು ನಡೆಸುವ ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಯಲ್ಲಿ ಉತ್ತೀರ್ಣರಾಗಬೇಕಾಗಿರುತ್ತದೆ.

16/1

## ಅರ್ಜಿ ಸಲ್ಲಿಸುವ ವಿಧಾನಃ

**ನಿಗದಿತ ಅರ್ಜಿ ಶುಲ್ಕ- ಪಾವತಿಸಬೇಕಾದ ಶುಲ್ಕ ಹಾಗೂ ವಿಧಾನಃ**

| | |
|---|---|
| ಸಾಮಾನ್ಯ ವರ್ಗ, ಪ್ರವರ್ಗ- 2ಎ, 2ಬಿ, 3ಎ, ಮತ್ತು 3ಬಿಗೆ ಸೇರಿದ ಅಭ್ಯರ್ಥಿಗಳು. | **ರೂ.250/-** |
| ಪರಿಶಿಷ್ಟ ಜಾತಿ ಃ ಪರಿಶಿಷ್ಟ ಪಂಗಡ , ಪ್ರವರ್ಗ-1 ಹಾಗೂ ಅಂಗವಿಕಲ ಅಭ್ಯರ್ಥಿಗಳಿಗೆ. | **ರೂ.100/-** |

ನಿಗದಿತ ಶುಲ್ಕವನ್ನು ನ್ಯಾಯಾಲಯದ ವೆಬ್‌ಸೈಟ್ **http://karnatakajudiciary.kar.nic.in/districtrecruitment.asp** ಅಥವಾ **http://districts.ecourts.gov.in/ballari**ಯ **Online Recruitment** ರಲ್ಲಿ ನೀಡಲಾದ ಲಿಂಕ್ ಮುಖಾಂತರ ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾದ **State Bank Collect** ಮೂಲಕ **online payment through net banking/credit card/debit card/challan download** ಸೌಲಭ್ಯದ ಮೂಲಕ ಪಾವತಿಸತಕ್ಕದ್ದು. ಶುಲ್ಕವನ್ನು ಆನ್‌ಲೈನ್ ಮೂಲಕ ಪಾವತಿ ಮಾಡಲು ಇಚ್ಛಿಸದ ಅಭ್ಯರ್ಥಿಗಳು ಚಲನ್ ಪ್ರತಿಯನ್ನು ಅಧಿಕೃತ ವೆಬ್‌ಸೈಟ್‌ನಿಂದ ಡೌನ್‌ಲೋಡ್ ಮಾಡಿಕೊಂಡು ಅದರ **print out** ಅನ್ನು ಪಡೆದುಕೊಂಡು ಎಸ್.ಬಿ.ಐ.'ನ ಯಾವುದೇ ಶಾಖೆಗೆ ಹಾಜರುಪಡಿಸಿ ಶುಲ್ಕವನ್ನು ಪಾವತಿಸತಕ್ಕದ್ದು. ಇದನ್ನು ಹೊರತುಪಡಿಸಿ ಯಾವುದೇ ಡಿಮ್ಯಾಂಡ್ ಡ್ರಾಫ್ಟ್ / ಪೋಸ್ಟಲ್ ಆರ್ಡರ್ / ಮನಿ ಆರ್ಡರ್ ಇವುಗಳನ್ನು ಸ್ವೀಕರಿಸಲಾಗುವುದಿಲ್ಲ. ಶುಲ್ಕ ಪಾವತಿಸದ ಅಭ್ಯರ್ಥಿಗಳ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

## ಅಭ್ಯರ್ಥಿಗಳು ON-LINE ಮೂಲಕ ಅರ್ಜಿ ಭರ್ತಿ ಮಾಡುವ ಮೊದಲು ಕೆಳಕಂಡ ಸೂಚನೆಗಳನ್ನು ಕಡ್ಡಾಯವಾಗಿ ತಿಳಿದುಕೊಳ್ಳತಕ್ಕದ್ದು ಃ

1. ಅಭ್ಯರ್ಥಿಗಳು ಅರ್ಜಿಯನ್ನು **ON-LINE** ಮೂಲಕ ಸಲ್ಲಿಸುವ ಮೊದಲು ಕೊಟ್ಟಿರುವ ಎಲ್ಲಾ ಸೂಚನೆಗಳನ್ನು ಗಮನವಿಟ್ಟು ಓದಿಕೊಳ್ಳಬೇಕು ಮತ್ತು ತಪ್ಪಾಗದಂತೆ ನೋಡಿಕೊಳ್ಳುವುದು, ಒಂದು ವೇಳೆ ಅರ್ಜಿ ಸರಿಯಿಲ್ಲದಿದ್ದಲ್ಲಿ ತಿರಸ್ಕರಿಸಲಾಗುವುದು.

2. ಅಭ್ಯರ್ಥಿಯು ಮೊಬೈಲ್ ಸಂಖ್ಯೆಯನ್ನು ಕಡ್ಡಾಯವಾಗಿ ನಮೂದಿಸುವುದು ಹಾಗೂ ಇ-ಮೇಲ್ ಐಡಿಯನ್ನು ಹೊಂದಿದ್ದಲ್ಲಿ ನಮೂದಿಸುವುದು. ಒಂದು ವೇಳೆ **SMS** ಅಥವಾ ಇ-ಮೇಲ್ ಮುಖಾಂತರ ತಮಗೆ ಸಂದೇಶ ತಲುಪದಿದ್ದಲ್ಲಿ ಈ ಪ್ರಾಧಿಕಾರ ಹೊಣೆಯಾಗಿರುವುದಿಲ್ಲ.

3. ಅಭ್ಯರ್ಥಿಯ ಭಾವಚಿತ್ರ ಮತ್ತು ಸಹಿಯನ್ನು ಸ್ಕ್ಯಾನ್ ಮಾಡಿ ಅಪ್‌ಲೋಡ ಮಾಡಲು ಈ ಕೆಳಕಂಡ ನಿರ್ದೇಶನಗಳನ್ನು ಪಾಲಿಸತಕ್ಕದ್ದು.

ಅ) ಬಣ್ಣದ ಭಾವಚಿತ್ರವು ಇತ್ತೀಚಿನದಾಗಿದ್ದು, ಅಳತೆಯಲ್ಲಿ **5cm** ಉದ್ದ **X 3.6cm** ಅಗಲವುಳ್ಳದ್ದಾಗಿರಬೇಕು ಮತ್ತು **50**ಕೆಬಿ ಅಳತೆಯದ್ದಾಗಿರಬೇಕು ಹಾಗೂ ಅದು**.jpg** ನಮೂನೆಯಲ್ಲಿರಬೇಕು. ಭಾವಚಿತ್ರದ ಹಿಂಬದಿಯು ಬಿಳಿಬಣ್ಣದ್ದಾಗಿರಬೇಕು.

ಬ) ಭಾವಚಿತ್ರವನ್ನು ಸ್ಕ್ಯಾನ್ ಮಾಡಿ ಅರ್ಜಿಗೆ ಅಪ್‌ಲೋಡ ಮಾಡಬೇಕು (ಯಾವುದೇ ಕಾರಣಕ್ಕೂ ಭಾವಚಿತ್ರದ ಮೇಲೆ ಸಹಿ ಮಾಡಬಾರದು).

ಕ) ಅಭ್ಯರ್ಥಿಯು ಕಪ್ಪು ಬಾಲ್‌ಪಾಯಿಂಟ್ ಪೆನ್ನಿನಲ್ಲಿ ಬಿಳಿ ಹಾಳೆಯ ಮೇಲೆ ಸಹಿ ಮಾಡಿ **(2.5cm** ಉದ್ದ **x 7.5cm** ಅಗಲವುಳ್ಳದ್ದಾಗಿರಬೇಕು ಮತ್ತು **26** ಕೆಬಿ ಅಳತೆಯದ್ದಾಗಿರಬೇಕು ಹಾಗೂ ಅದು **.jpg** ನಮೂನೆಯಲ್ಲಿರಬೇಕು) ಅಪ್‌ಲೋಡ ಮಾಡಬೇಕು.

4. ತದನಂತರ ಅಭ್ಯರ್ಥಿಯು **ON-LINE** ಅರ್ಜಿಯಲ್ಲಿ ಕೋರಲಾದ ಎಲ್ಲಾ ಮಾಹಿತಿಗಳನ್ನು ಭರ್ತಿ ಮಾಡಿ ನಿಗದಿತ ಶುಲ್ಕ ಪಾವತಿಸಲು ಅರ್ಜಿಯಲ್ಲಿ ತಿಳಿಸಿರುವಂತೆ ಕ್ರಮ ಕೈಗೊಳ್ಳುವುದು. ತದನಂತರ ಅರ್ಜಿಯನ್ನು ಹಾಗೂ ಶುಲ್ಕವನ್ನು ತುಂಬಿದ ಪ್ರತಿಯನ್ನು **download** ಮಾಡಿಕೊಂಡು ನೇಮಕಾತಿ ಪ್ರಕ್ರಿಯೆ ಮುಗಿಯುವರೆಗೂ ತಮ್ಮ ಹತ್ತಿರ ಕಾಯ್ದಿರಿಸಕೊಳ್ಳತಕ್ಕದು ಹಾಗೂ ಸಾಮರ್ಥ್ಯ ಪರೀಕ್ಷೆಯ ಸಮಯದಲ್ಲಿ ಅಥವಾ ನಿಗದಿಪಡಿಸಿದ ದಿನಾಂಕದಂದು ಹಾಜರು ಪಡಿಸತಕ್ಕದ್ದು.

5. ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದವರೆಗೂ ವಿಳಂಬ ಮಾಡದೇ, ಮುಂಚಿತವಾಗಿ ಅರ್ಜಿಗಳನ್ನು ಸಲ್ಲಿಸತಕ್ಕದ್ದು. ಒಮ್ಮೆ ಶುಲ್ಕವನ್ನು ಪಾವತಿಸಿದ ನಂತರ ಅದನ್ನು ಯಾವುದೇ ಸಂದರ್ಭದಲ್ಲಿ ಹಿಂತಿರುಗಿಸಲಾಗುವುದಿಲ್ಲ.

6. ನ್ಯಾಯಾಲಯದ ಅಧಿಕೃತ ವೆಬ್‌ಸೈಟ್ **http://karnatakajudiciary.kar.nic.in/districtrecruitment.asp** ಅಥವಾ **http://districts.ecourts.gov.in/ballari** ನಲ್ಲಿ **24.02.2020** ದಿನಾಂಕದ ರಾತ್ರಿ **11-59**ರವರೆಗೆ ಅರ್ಜಿಗಳನ್ನು ಸಲ್ಲಿಸಬಹುದಾಗಿದೆ ಮತ್ತು ಆನ್‌ಲೈನ್ ಮುಖೇನ ಶುಲ್ಕ ಪಾವತಿಸಬಹುದಾಗಿದೆ.

7. ಸಾಮರ್ಥ್ಯ ಪರೀಕ್ಷೆಗೆ ಕರೆ ಪತ್ರವನ್ನಾಗಲಿ, ಆಯ್ಕೆಪಟ್ಟಿಯನ್ನಾಗಲಿ ಅಂಚೆಯ ಮೂಲಕ ಕಳುಹಿಸುವುದಿಲ್ಲ, ಅರ್ಹ ಅಭ್ಯರ್ಥಿಗಳಿಗೆ ಮಾಹಿತಿಯನ್ನು ಕೇವಲ **SMS** ಹಾಗೂ **e-mail** ಮುಖಾಂತರ ಒದಗಿಸಲಾಗುವುದು. ಸಾಮರ್ಥ್ಯ ಪರೀಕ್ಷೆಗೆ ಅರ್ಹರಾಗುವವರ ಪಟ್ಟಿಯನ್ನು ನ್ಯಾಯಾಲಯದ ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗುವುದು.

8. ಅಭ್ಯರ್ಥಿಯು ನಕಲಿ ಅಭ್ಯರ್ಥಿಯಾಗಿರುವರೆಂದು ಅಥವಾ ಖೋಟಾ ದಸ್ತಾವೇಜು ಅಥವಾ ತಿದ್ದಲಾದ ದಸ್ತಾವೇಜುಗಳನ್ನು ಸಲ್ಲಿಸಿರುವರೆಂದು ಅಥವಾ ತಪ್ಪು ಅಥವಾ ಸುಳ್ಳು ಹೇಳಿಕೆ ನೀಡಿರುವರೆಂದು ಅಥವಾ ವಾಸ್ತವಿಕ ಮಾಹಿತಿಯನ್ನು ಮರೆಮಾಚಿರುವರೆಂದು ಅಥವಾ ನೇಮಕಾತಿ ಉದ್ದೇಶಗಳಿಗೆ ನಡೆಸಲಾದ ಪರಿಶೀಲನೆ ಪ್ರಕ್ರಿಯೆಗಳ ಸಂದರ್ಭಗಳಲ್ಲಿ ಅನುಚಿತ ಮಾರ್ಗವನ್ನು ಅನುಸರಿಸುತ್ತಿರುವರೆಂದು ಅಥವಾ ಅನುಸರಿಸಲು ಪ್ರಯತ್ನಿಸಿರುವರೆಂದು ಅಥವಾ ಅವರ ನೇಮತಿಕಾತಿಯ ಸಂಬಂಧದಲ್ಲಿ ಯಾವುದೇ ಇತರೇ ಅಕ್ರಮ ಮತ್ತು ಅನುಚಿತ ಮಾರ್ಗವನ್ನು ಅವಲಂಭಿಸಿರುವರೆಂದು ಕಂಡುಬಂದಲ್ಲಿ ಅವರು ಸ್ವತಃ ಕ್ರಿಮಿನಲ್ ವ್ಯವಹರಣೆಗಳಿಗೆ ಮತ್ತು ಶಿಸ್ತು ಕ್ರಮಕ್ಕೆ ಒಳಪಡುವುದಲ್ಲದೇ ನೇಮಕಾತಿ ಪ್ರಕ್ರಿಯೆಯ ಯಾವುದೇ ಹಂತದಲ್ಲಿ ಅಥವಾ ನೇಮಕಾತಿಗೊಂಡ ನಂತರವೂ ಆಯ್ಕೆ/ ನೇಮಕಾತಿಯಿಂದ ಅನರ್ಹಗೊಳ್ಳುವರು.

10. ಅಭ್ಯರ್ಥಿಗಳು **ON-LINE** ನಲ್ಲಿ ಅರ್ಜಿ ಸಲ್ಲಿಸಲು ನಿಗದಿ ಪಡಿಸಿರುವ ಕೊನೆಯ ದಿನಾಂಕದೊಳಗೆ ಈ ಕೆಳಕಂಡ ಪ್ರಮಾಣ ಪತ್ರಗಳನ್ನು ನಿಗದಿತ ನಮೂನೆಗಳಲ್ಲಿ ಸಂಬಂಧಪಟ್ಟ ಪ್ರಾಧಿಕಾರದಿಂದ ಪಡೆದಿಟ್ಟುಕೊಂಡಿರತಕ್ಕದ್ದು ಹಾಗೂ ಕೋರಿರುವ ಮೀಸಲಾತಿ ಪ್ರಮಾಣ ಪತ್ರಗಳು ಮತ್ತು ಇತರೇ ಪ್ರಮಾಣ ಪತ್ರಗಳನ್ನು ಕೊನೆಯ ದಿನಾಂಕದೊಳಗೆ ಪಡೆದಿಟ್ಟುಕೊಂಡಿರತಕ್ಕದ್ದು ಹಾಗೂ ಅವುಗಳ ಮೂಲ ಪ್ರತಿಗಳನ್ನು ಪರಿಶೀಲನೆಯ ಸಮಯದಲ್ಲಿ ಅಥವಾ ಅದಕ್ಕೂ ಮುಂಚೆ (ಕಛೇರಿಯು ನಿಗಧಿಪಡಿಸಿದ ದಿನಾಂಕದಂದು) ಹಾಜರು ಪಡಿಸಬೇಕು ಅಲ್ಲದೇ ಒಂದು ಸೆಟ್ ಸ್ವಯಂ ಧೃಢೀಕರಿಸಿರುವ ದಾಖಲೆ ಪ್ರತಿಗಳನ್ನು ಸಲ್ಲಿಸತಕ್ಕದ್ದು. ಇತರೇ ನಮೂನೆಗಳಲ್ಲಿ ಅಥವಾ ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದ ನಂತರ ಪಡೆದ ಯಾವುದೇ ಪ್ರಮಾಣ ಪತ್ರಗಳನ್ನು ಪರಿಗಣಿಸಲಾಗುವುದಿಲ್ಲ.

ಅ) ಹುದ್ದೆಗೆ ನಿಗದಿಪಡಿಸಿದ ಶುಲ್ಕವನ್ನು ಪಾವತಿಸಿದ ಚಲನ್/ವಿವರದ ಪ್ರತಿ.

ಆ) ಜನ್ಮ ದಿನಾಂಕದ ಧೃಢೀಕರಣಕ್ಕಾಗಿ ಎಸ್.ಎಸ್.ಎಲ್.ಸಿ ಅಂಕಪಟ್ಟಿ / ವರ್ಗಾವಣೆ ಪಟ್ಟಿ/ಕ್ಯುಮುಲೇಟೀವ್ ರೆಕಾರ್ಡ್ ದಾಖಲಾತಿಗಳು.

ಇ) ವಯೋಮಿತಿ ಸಡಿಲಿಕೆ ಕೋರುವ ಅಥವಾ ಮೀಸಲಾತಿ ಕೋರುವ ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡದ ಅಭ್ಯರ್ಥಿಗಳು ನಮೂನೆ-ಡಿ ಯಲ್ಲಿ ಪ್ರವರ್ಗ-1ರ ಅಭ್ಯರ್ಥಿಗಳು ನಮೂನೆ-ಇ ಯಲ್ಲಿ ಮತ್ತು **2**ಎ, **2**ಬಿ, **3**ಎ ಮತ್ತು **3**ಬಿ ಗೆ ಸೇರಿದ ಅಭ್ಯರ್ಥಿಗಳು ನಮೂನೆ-ಎಫ್ ನಲ್ಲಿ ಸಂಬಂದಿಸಿದ ತಹಶೀಲ್ದಾರರಿಂದ ಪಡೆದ ಜಾತಿ ಮತ್ತು ಆದಾಯ ಪ್ರಮಾಣ ಪತ್ರ.

ಈ) ವಯೋಮಿತಿ ಸಡಿಲಿಕೆ ಅಥವಾ ಮೀಸಲಾತಿ ಕೋರುವ ಮಾಜಿ ಸೈನಿಕ ಅಭ್ಯರ್ಥಿಗಳು ಸೈನಿಕ ಸೇವೆಯಿಂದ ಬಿಡುಗಡೆಯೊದ/ವಿಮುಕ್ತಿ ಹೊಂದಿದ ಬಗೆಗಿನ ಪ್ರಮಾಣ ಪತ್ರ.

ಉ) ವಯೋಮಿತಿ ಸಡಿಲಿಕೆ ಅಥವಾ ಮೀಸಲಾತಿ ಕೋರುವ ವಿಧವೆಯರು, ಜೀತ ಕಾರ್ಮಿಕರು ವಯೋಮಿತಿ ರಿಯಾಯ್ತಿ ಕೋರಲು ಸಕ್ಷಮ ಪ್ರಾಧಿಕಾರದಿಂದ ಪಡೆದ ಪ್ರಮಾಣ ಪತ್ರ.

ಊ) ವಯೋಮಿತಿ ಸಡಿಲಿಕೆ ಅಥವಾ ಮೀಸಲಾತಿ ಕೋರುವ ಅಂಗವಿಕಲ ವ್ಯಕ್ತಿಗಳು ನಿಗದಿತ ನಮೂನೆಯಲ್ಲಿ ನೀಡುವ ಅಂಗವಿಕಲ ವ್ಯಕ್ತಿ ಪ್ರಮಾಣ ಪತ್ರ.

ಎ) ಹೈದ್ರಾಬಾದ-ಕರ್ನಾಟಕ ಪ್ರದೇಶದ ಸ್ಥಳೀಯ ಅಭ್ಯರ್ಥಿಗಳು ಮಾತ್ರ ಅರ್ಜಿ ಸಲ್ಲಿಸಬಹುದಾಗಿದೆ. ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ಸರಕಾರದ ಅದಿಸೂಚನೆ ಸಂಖ್ಯೆ: **DPAR/43/HKC/2013** ಬೆಂಗಳೂರು ದಿನಾಂಕ : **29-01-2014**ರಲ್ಲಿ ನಿಗದಿಪಡಿಸಲಾದ ಕರ್ನಾಟಕ ಸಾರ್ವಜನಿಕ ಉದ್ಯೋಗ (ಹೈದ್ರಾಬಾದ್-ಕರ್ನಾಟಕ ಪ್ರದೇಶಕ್ಕೆ ನೇಮಕಾತಿಯಲ್ಲಿ ಮೀಸಲಾತಿ) (ಅರ್ಹತಾ ಪ್ರಮಾಣ ಪತ್ರಗಳ ನೀಡಿಕೆ) ನಿಯಮಗಳು-2013ರ ನಿಯಮ 3(3)ರಲ್ಲಿ ಗೊತ್ತುಪಡಿಸಿರುವಂತೆ "ಅನುಬಂಧ-ಎ" ಯಲ್ಲಿರುವಂತೆ "ಅರ್ಹತಾ ಪ್ರಮಾಣ ಪತ್ರ" ವನ್ನು ಸಂಬಂಧಪಟ್ಟ ಸಹಾಯಕ ಆಯುಕ್ತರವರಿಂದ ಹಾಗೂ ಸೇವಾನಿರತ ಅಭ್ಯರ್ಥಿಗಳು ಸ್ವಗ್ರಾಮ ಪ್ರಮಾಣವನ್ನು ಸಂಬಂಧಪಟ್ಟ ನೇಮಕಾತಿ ಪ್ರಾಧಿಕಾರದಿಂದ ಅದಿಸೂಚನೆಯ ಕೊನೆಯ ದಿನಾಂಕದ ಒಳಗಾಗಿ ಪಡೆದಿರಬೇಕು.

ಏ) ಅರ್ಜಿಯನ್ನು ಕಳುಹಿಸಲು ನಿಗದಿಪಡಿಸಿದ ದಿನಾಂಕದಿಂದ **6** ತಿಂಗಳ ಒಳಗೆ ಇಬ್ಬರು ಗೌರವಾನ್ವಿತ ವ್ಯಕ್ತಿಗಳು ನೀಡಿರುವ ನಡತೆ ಪ್ರಮಾಣ ಪತ್ರ ಹಾಗೂ ಶಾಲಾ ನಡತೆ ಪ್ರಮಾಣ ಪತ್ರಗಳನ್ನು ಪಡೆದಿತರಕ್ಕದ್ದು.

ಐ) ಗ್ರಾಮೀಣ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ನಿಗದಿತ ನಮೂನೆಯಲ್ಲಿ ಅಧಿಕೃತ ಅಧಿಕಾರಿಗಳಿಂದ ಪಡೆದ ಗ್ರಾಮೀಣ ವಿದ್ಯಾರ್ಥಿ ಪ್ರಮಾಣ ಪತ್ರ (ನಮೂನೆ – 2) ಸಾಮಾನ್ಯ ವರ್ಗಕ್ಕೆ

6/1

ಸೇರಿದ ಗ್ರಾಮೀಣ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಗ್ರಾಮೀಣ ವಿದ್ಯಾರ್ಥಿ ಪ್ರಮಾಣ ಪತ್ರದೊಂದಿಗೆ ಮೇಲುಸ್ತರಕ್ಕೆ ಸೇರಿಲ್ಲವೇಂಬ ಬಗ್ಗೆ ಸಂಬಂಧಿಸಿದ ತಹಶೀಲ್ದಾರರು ಪ್ರಮಾಣ ಪತ್ರ (ನಮೂನೆ-1).

ಒ) ಅರ್ಜಿಯನ್ನು ಕಳುಹಿಸಲು ನಿಗದಿಪಡಿಸಿದ ದಿನಾಂಕದಿಂದ **6** ತಿಂಗಳ ಒಳಗೆ ಇಬ್ಬರು ಗೌರವಾನ್ವಿತ ವ್ಯಕ್ತಿಗಳು ನೀಡಿರುವ ನಡತೆ ಪ್ರಮಾಣ ಪತ್ರ ಹಾಗೂ ಶಾಲಾ ನಡತೆ ಪ್ರಮಾಣ ಪತ್ರಗಳನ್ನು ಪಡೆದಿತರಕ್ಕದ್ದು.

ಓ) ಸರಕಾರಿ ಸೇವೆಯಲ್ಲಿದ್ದು ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ಸಂಬಂಧಿಸಿದ ನೇಮಕಾತಿ ಪ್ರಾಧಿಕಾರದಿಂದ ನಿರಾಕ್ಷೇಪಣಾ ಪ್ರಮಾಣ ಪತ್ರವನ್ನು ಪಡೆದಿರತಕ್ಕದ್ದು.

( ಪಿ.ಟಿ.ಕಟ್ಟಿಮನಿ )
Pr1. District and Sessions Judge
ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
BALLARI.
ಬಳ್ಳಾರಿ.

ಪ್ರತಿಯನ್ನು ಮಹಾ ವಿಲೇಖನಾಧಿಕಾರಿಗಳು, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು ಇವರಿಗೆ (ಪತ್ರದೊಂದಿಗೆ) ಸಲ್ಲಿಸಲಾಗಿದೆ.

<u>ಪ್ರತಿಯನ್ನು</u> :-

(1) ಜಿಲ್ಲಾ ವಾರ್ತಾ ಮತ್ತು ಪ್ರಚಾರ ಇಲಾಖೆ, ಬೆಂಗಳೂರು/ಬಳ್ಳಾರಿ ಇವರಿಗೆ ವ್ಯಾಪಕ ಪ್ರಚಾರಕ್ಕಾಗಿ.
(2) ಉದ್ಯೋಗ ವಿನಿಮಯ ಕಛೇರಿ, ಬಳ್ಳಾರಿ.
(3) ಬಳ್ಳಾರಿ ಜಿಲ್ಲೆಯ ಎಲ್ಲಾ ನ್ಯಾಯಾಧೀಶರಿಗೆ (ಇ-ಮೇಲ್ ಮೂಲಕ) ತಮ್ಮ ನ್ಯಾಯಾಲಯದ ನೋಟೀಸ್ ಬೋರ್ಡ್‌ಗಳಲ್ಲಿ ಅಂಟಿಸಲು.
(4) ರಾಜ್ಯದ ಎಲ್ಲಾ ಜಿಲ್ಲೆಗಳ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಿಗೆ ಮಾಹಿತಿಗಾಗಿ, ವ್ಯಾಪಾಕ ಪ್ರಚಾರಕ್ಕಾಗಿ ಹಾಗೂ ತಮ್ಮ ನ್ಯಾಯಾಲಯದ ನೋಟೀಸ್ ಬೋರ್ಡ್‌ಗಳಲ್ಲಿ ಅಂಟಿಸವುದಾಕ್ಕಾಗಿ. (ಇ-ಮೇಲ್ ಮೂಲಕ).
(5) ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯ ಪತ್ರ, ಸರ್ಕಾರಿ ಮುದ್ರಣಾಲಯ, ಬೆಂಗಳೂರು.
(6) ಈ ಕಛೇರಿಯ ನೋಟೀಸ್ ಬೋರ್ಡ್‌ನಲ್ಲಿ ಅಂಟಿಸಲು.

END